# Akashvani: Bangalore
# Regional Bulletin In Kannada
# 12.12.2025 : 14.30hrs
# ಆಕಾಶವಾಣಿ ಬೆಂಗಳೂರು
# ಪ್ರದೇಶ ಸಮಾಚಾರ

**ಮುಖ್ಯಾಂಶಗಳು:**

1. ಮೇಕೆದಾಟು ಯೋಜನೆ ಪೂರ್ವಭಾವಿ ಸಿದ್ಧತೆಗೆ ತಂಡ ರಚಿಸಿ ಸರ್ಕಾರ ಆದೇಶ
2. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವಿಭಜಿಸಲು ಸರ್ಕಾರ ನಿರ್ಧಾರ
3. ದೇವನಹಳ್ಳಿಯ ವಿಮಾನಯಾನ ಪಾರ್ಕ್ ನಿರ್ಮಾಣದ ಭೂಸ್ವಾಧೀನ ರದ್ದು; ವಿಧಾನಸಭೆಯಲ್ಲಿ ಸಚಿವ ಎಂ.ಬಿ. ಪಾಟೀಲ್ ಸ್ಪಷ್ಟನೆ
4. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಮುಂಜಾಗ್ರತಾ ಕ್ರಮಗಳೊಂದಿಗೆ ಕ್ರಿಕೆಟ್ ಪಂದ್ಯಗಳ ಆಯೋಜನೆಗೆ ಅನುಮತಿ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
5. ಮುಂಡಗೋಡು ಟಿಬೇಟಿಯನ್ ಕ್ಯಾಂಪ್‌ಗೆ ಆಗಮಿಸಿದ ಬೌದ್ಧ ಧರ್ಮಗುರು ದಲೈಲಾಮಾ; ಬಿಗಿ ಭದ್ರತೆ

*********

ಮೇಕೆದಾಟು ಯೋಜನೆ ಪೂರ್ವಭಾವಿ ಸಿದ್ಧತೆಗೆ ಕರ್ನಾಟಕ ಇಂಜಿನಿಯರಿಂಗ್ ಸಂಶೋಧನಾ ಕೇಂದ್ರದ ನಿರ್ದೇಶಕರ ನೇತೃತ್ವದಲ್ಲಿ ತಂಡ ರಚಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಈ ತಂಡವು ಯಾವುದೇ ಅಡೆತಡೆ ಇಲ್ಲದೆ ಮೇಕೆದಾಟು ಯೋಜನೆಗೆ ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸಲು ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರವನ್ನು ಕೇಂದ್ರ ಸ್ಥಾನವನ್ನಾಗಿಟ್ಟುಕೊಂಡು ಕಾರ್ಯ ನಿರ್ವಹಿಸಲಿದೆ. ರಾಮನಗರದಲ್ಲೇ ಮೇಕೆದಾಟು ಯೋಜನೆ ಕಚೇರಿ ಸ್ಥಾಪಿಸಲಾಗುವುದು ಎಂದು ಆದೇಶದಲ್ಲಿ ತಿಳಿಸಲಾಗಿದೆ. ಈ ತಂಡಕ್ಕೆ ಓರ್ವ ಕಾರ್ಯಪಾಲಕ ಇಂಜಿನಿಯರ್, ಮೂವರು ತಾಂತ್ರಿಕ ಸಹಾಯಕರು, ಆರು ಸಹಾಯಕ ಇಂಜಿನಿಯರ್, ಓರ್ವ ಸಹಾಯಕ ಆಡಳಿತಾಧಿಕಾರಿ ಸೇರಿದಂತೆ ಹಲವು ಸಿಬ್ಬಂದಿಯನ್ನು ನೇಮಿಸಲಾಗಿದೆ. ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಎಲ್ಲಾ ಕಡತ, ಪತ್ರ ವ್ಯವಹಾರ, ಹಾಗೂ ಇನ್ನಿತರೆ ದಾಖಲೆಗಳನ್ನು ಕೆಇಆರ್‌ಎಸ್ ನಿರ್ದೇಶಕರಿಗೆ ಹಸ್ತಾಂತರಿಸುವಂತೆ ಕೆವಿಎನ್‌ಎನ್‌ಎಲ್‌ನ ವ್ಯವಸ್ಥಾಪಕ ನಿರ್ದೇಶಕರಿಗೆ ಸೂಚಿಸಲಾಗಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

*********

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯನ್ನು ವಿಭಜಿಸಿ ಹೊಸದಾಗಿ ಧಾರವಾಡ ಮಹಾನಗರ ಪಾಲಿಕೆ ಹಾಗೂ ಹುಬ್ಬಳ್ಳಿ ಮಹಾನಗರ ಪಾಲಿಕೆ ರಚಿಸಲು ಸರ್ಕಾರ ನಿರ್ಧರಿಸಿದೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬಿ.ಎಸ್.ಸುರೇಶ್ ಹೇಳಿದ್ದಾರೆ. ವಿಧಾನಸಭೆಯಲ್ಲಿಂದು ಸದಸ್ಯ ಅಬ್ಬಯ್ಯ ಪ್ರಸಾದ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವ ಬಿ.ಎಸ್.ಸುರೇಶ್, ಹುಬ್ಬಳ್ಳಿ ಮತ್ತು ಧಾರವಾಡ ಪ್ರತ್ಯೇಕ ಮಹಾನಗರ ಪಾಲಿಕೆ ರಚನೆ ಸಂಬಂಧ ಸಾರ್ವಜನಿಕರ ಆಕ್ಷೇಪಣೆ, ಸಲಹೆ ಸಹಿತ ಸಮಗ್ರ ವರದಿಯನ್ನು ರಾಜ್ಯಪಾಲರ ಅನುಮೋದನೆಗೆ ಕಳುಹಿಸಲಾಗಿದೆ. ರಾಜ್ಯಪಾಲರ ಅನುಮೋದನೆ ದೊರೆತ ಕೂಡಲೆ ಮಹಾನಗರ ಪಾಲಿಕೆ ರಚನೆ ಸಂಬಂಧ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

*********

ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲೂಕಿನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಏರೋಸ್ಪೇಸ್ ಪಾರ್ಕ್ ನಿರ್ಮಾಣದ ಭೂ ಸ್ವಾಧೀನವನ್ನು ರದ್ದುಪಡಿಸಿ ಡಿಸೆಂಬರ್ ೬ ರಂದು ಆದೇಶ ಹೊರಡಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಹೇಳಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿಂದು ಬಿಜೆಪಿಯ ಅರವಿಂದ ಬೆಲ್ಲದ್ ಅವರ ಪ್ರಶ್ನೆಗೆ ಉತ್ತರಿಸಿದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಒಂದು ಸಾವಿರದ ೭೭೭ ಎಕರೆ ಜಮೀನನ್ನು ಭೂ ಸ್ವಾಧೀನ ಪ್ರಕ್ರಿಯೆಯಿಂದ ಕೈಬಿಡಲು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಕಾಯಿದೆ ಕಲಂ ೪ರಡಿ ಅಧಿಸೂಚನೆ ಹೊರಡಿಸಲಾಗಿದೆ. ಸ್ವಯಂ ಪ್ರೇರಣೆಯಿಂದ ರೈತರು ಮಂಡಳಿಗೆ ಭೂಮಿ ನೀಡಲು ಬಂದರೆ ಅವರ ಒಪ್ಪಿಗೆಯೊಂದಿಗೆ ಭೂಮಿ ಪಡೆದುಕೊಳ್ಳಲಾಗುವುದು ಎಂದು ಸಚಿವರು ತಿಳಿಸಿದ್ದಾರೆ. ದೇವನಹಳ್ಳಿಯ ಚನ್ನರಾಯಪಟ್ಟಣದ ಆ ಸಂಪೂರ್ಣ ಪ್ರದೇಶವನ್ನು ಹಸಿರು ವಲಯವೆಂದು ಮುಂದುವರಿಸುವ ಸಲುವಾಗಿ ವಿಶೇಷ ಕೃಷಿ ವಲಯವೆಂದು ಘೋಷಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

*********

ವಿದ್ಯುತ್ ಮಗ್ಗಗಳಿಗೆ ಹತ್ತು ಅಶ್ವಶಕ್ತಿವರೆಗೆ ನವೆಂಬರ್ ೨೦೨೩ರಿಂದ ಜಾರಿ ಮಾಡಿರುವ ಉಚಿತ ವಿದ್ಯುತ್ ಪೂರೈಕೆ ಯೋಜನೆಯನ್ನು ಏಪ್ರಿಲ್‌ನಿಂದ ಅನ್ವಯಗೊಳಿಸುವ ನೇಕಾರರ ಬೇಡಿಕೆಯನ್ನು ಸರ್ಕಾರ ಪರಿಗಣಿಸಲಿದೆ. ಈ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಲಾಗುವುದು ಎಂದು ಜವಳಿ ಸಚಿವ ಶಿವಾನಂದ ಪಾಟೀಲ್ ಭರವಸೆ ನೀಡಿದ್ದಾರೆ. ವಿಧಾನಸಭೆಯಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಶಶಿಕಲಾ ಜೊಲ್ಲೆ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಚುನಾವಣಾ ಪ್ರಣಾಳಿಕೆಯಲ್ಲಿ ಭರವಸೆ ನೀಡಿದಂತೆ ಹತ್ತು ಅಶ್ವಶಕ್ತಿವರೆಗಿನ ವಿದ್ಯುತ್ ಮಗ್ಗಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ. ಉಚಿತ ವಿದ್ಯುತ್ ಪೂರೈಕೆ ಯೋಜನೆಯಿಂದ ವಾರ್ಷಿಕ ೧೨೦ ರಿಂದ ೧೩೦ ಕೋಟಿ ರೂಪಾಯಿ ವೆಚ್ಚವಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ. ಸರ್ಕಾರದ ಆದೇಶ ಹೊರಬಿದ್ದ ದಿನದಿಂದ ಉಚಿತ ವಿದ್ಯುತ್ ಪೂರೈಕೆ ಅನ್ವಯವಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

*********

ರಾಜ್ಯದಲ್ಲಿನ ಎಲ್ಲಾ ಸಂಘ ಸಂಸ್ಥೆಗಳು, ವ್ಯಾಪಾರ ವಹಿವಾಟು ನಡೆಸುವ ಮಳಿಗೆಗಳು ಕಡ್ಡಾಯವಾಗಿ ಕನ್ನಡದಲ್ಲಿ ನಾಮಫಲಕಗಳನ್ನು ಅಳವಡಿಸಿಕೊಳ್ಳಬೇಕು ಎಂಬ ಕಾನೂನನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಸರ್ಕಾರ ಎಲ್ಲಾ ರೀತಿಯ ಕ್ರಮ ಕೈಗೊಂಡಿದೆ ಎಂದು ಮೇಲ್ಮನೆಗೆ ಸಚಿವ ಶಿವರಾಜ್ ತಂಗಡಗಿ ಹೇಳಿದ್ದಾರೆ. ರಾಜ್ಯದ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ

ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳಲ್ಲಿ ಒಟ್ಟು ೫ ಸಾವಿರದ ೪೩೬ ಮೇಲ್ವಿಚಾರಕರು ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ತಿಳಿಸಿದ್ದಾರೆ.

*********

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ಪಂದ್ಯಗಳ ಆಯೋಜನೆಗೆ ಅನುಮತಿ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ಗೌರವ ಉಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ. ಈ ವಿಚಾರದಲ್ಲಿ ವಹಿಸಬೇಕಾದ ಮುಂಜಾಗ್ರತಾ ಕ್ರಮಗಳ ಜವಾಬ್ದಾರಿಯನ್ನು ಗೃಹ ಸಚಿವ ಪರಮೇಶ್ವರ್ ಅವರಿಗೆ ವಹಿಸಲಾಗಿದೆ. ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಅವರ ತಂಡ ಹಾಗೂ ಪೊಲೀಸ್ ಅಧಿಕಾರಿಗಳು ಈ ಬಗ್ಗೆ ಚರ್ಚೆ ನಡೆಸಲಿದ್ದು, ಮುಂದಿನ ದಿನಗಳಲ್ಲಿ ಯಾವುದೇ ಅನಾಹುತ ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

*********

ಬೌದ್ಧ ಧರ್ಮಗುರು ದಲೈ ಲಾಮಾ ಆರು ವರ್ಷಗಳ ಬಳಿಕ ಮುಂಡಗೋಡು ಟಿಬೆಟಿಯನ್ ಕ್ಯಾಂಪ್‌ಗೆ ಆಗಮಿಸಿದ್ದಾರೆ. ಇಂದು ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಸಂದರ್ಭದಲ್ಲಿ ರಾಜ್ಯ ಸರಕಾರದ ಪರವಾಗಿ ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸ್ವಾಗತಿಸಿದರು. ಈ ಸಂದರ್ಭದಲ್ಲಿ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ್ ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು. ನಂತರ ದಲೈ ಲಾಮಾ ಅವರು ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡು ಪಟ್ಟಣದ ಟಿಬೇಟಿಯನ್ ಕ್ಯಾಂಪ್‌ಗೆ ತೆರಳಿದರು. ಮುನ್ನೆಚ್ಚರಿಕಾ ಕ್ರಮವಾಗಿ ಮುಂಡಗೋಡು ಪಟ್ಟಣದಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ.

*********

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ರಾಷ್ಟ್ರೀಯ ಜೀವನೋಪಾಯ ಅಭಿಯಾನದ ಅಂಗವಾಗಿ ಬೆಳಗಾವಿಯ ಸರ್ದಾರ್ ಹೈಸ್ಕೂಲ್ ಮೈದಾನದಲ್ಲಿ ಆಯೋಜಿಸಿದ್ದ "ರಾಜ್ಯ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ, ಮಹಿಳಾ ಸ್ವ ಸಹಾಯ ಗುಂಪುಗಳ ಉತ್ಪನ್ನಗಳ ಮಾರಾಟ ಮೇಳವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಕೌಶಲ್ಯಾಭಿವೃದ್ಧಿ ಮತ್ತು ವೈದ್ಯಕೀಯ ಶಿಕ್ಷಣ ಸಚಿವರಾದ ಶರಣಪ್ರಕಾಶ ಪಾಟೀಲ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

*********

ಸುರಕ್ಷತೆ ದೃಷ್ಟಿಯಿಂದ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಇಂದಿನಿಂದ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಕಡ್ಡಾಯಗೊಳಿಸಲಾಗಿದೆ. ದ್ವಿಚಕ್ರ ವಾಹನ ಸವಾರರು ಸ್ವಯಂಪ್ರೇರಿತರಾಗಿ ಹೆಲ್ಮೆಟ್ ಧರಿಸಿ ಸಂಭಾವ್ಯ ದಂಡದಿಂದ ಪಾರಾಗಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

*********

ಯಾದಗಿರಿ ತಾಲ್ಲೂಕಿನ ಮೈಲಾಪುರ ಗ್ರಾಮದಲ್ಲಿನ ಮೈಲಾರಲಿಂಗೇಶ್ವರ ದೇವಸ್ಥಾನದಲ್ಲಿ ೨೦೨೬ರ ಜನವರಿ ೧೨ರಿಂದ ೧೮ರವರೆಗೆ ಜಾತ್ರೆ ನಡೆಯಲಿದೆ. ಜಾತ್ರೆಗೆ ಯಾವುದೇ ಲೋಪಗಳಿಲ್ಲದಂತೆ ಅಗತ್ಯ ಸಿದ್ಧತೆಗಳು, ಮೂಲಸೌಕರ್ಯಗಳ ವ್ಯವಸ್ಥೆಯನ್ನು ಸಂಬಂಧಿತ ಅಧಿಕಾರಿಗಳು ಕೈಗೊಂಡು, ವರದಿ ನೀಡುವಂತೆ ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಸೂಚಿಸಿದ್ದಾರೆ. ಪ್ರಾಣಿ ಪ್ರತಿಬಂಧಕ ಕಾಯ್ದೆಯಡಿ ಜಾತ್ರೆಯ ವೇಳೆ ಕುರಿ ಮರಿಗಳನ್ನು ಹಾರಿಸುವುದನ್ನು ನಿಷೇಧಿಸಲಾಗಿದೆ. ಆರು ಚೆಕ್ ಪೋಸ್ಟ್‌ಗಳನ್ನು ರಚಿಸಿ, ಕುರಿ ಮರಿಗಳನ್ನು ತರದಂತೆ ಎಚ್ಚರವಹಿಸಬೇಕು. ಜಾತ್ರೆಗೆ ಕರ್ನಾಟಕ, ಮಹಾರಾಷ್ಟ್ರ, ತೆಲಂಗಾಣ ರಾಜ್ಯಗಳಿಂದ ಹೆಚ್ಚಿನ ಭಕ್ತರು ಆಗಮಿಸುವುದರಿಂದ ಸ್ವಚ್ಛತಾ ಕಾರ್ಯಕ್ಕೆ ಆದ್ಯತೆ ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ.

****END*****